## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 797 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಮುನಿರಾಜು ಗೌಡ ಪಿ.ಎಂ |
| ಉತ್ತರಿಸುವ ದಿನಾಂಕ | : | 20.12.2021 |
| ಉತ್ತರಿಸುವ ಸಚಿವರು | : | ಉನ್ನತ ಶಿಕ್ಷಣ, ಐಟಿ–ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಶುಲ್ಕ ಹೆಚ್ಚಳ ಮಾಡಲಾಗಿದೆಯೇ; | ಹೌದು |
| ಆ) | ಹಾಗಿದ್ದಲ್ಲಿ ಯಾವ ಯಾವ ಶುಲ್ಕವನ್ನು ಎಷ್ಟು ಪ್ರಮಾಣದಲ್ಲಿ ಹೆಚ್ಚು ಮಾಡಲಾಗಿದೆ; ಮತ್ತು ಪ್ರತಿಯೊಬ್ಬ ವಿದ್ಯಾರ್ಥಿಗೆ ವಾರ್ಷಿಕ ಒಟ್ಟಾರೆ ಉಂಟಾಗುವ ಹೆಚ್ಚಿನ ಆರ್ಥಿಕ ಹೊರೆ ಎಷ್ಟು; ಶುಲ್ಕ ಹೆಚ್ಚಳದಿಂದ ರಾಜ್ಯ ಸರ್ಕಾರಕ್ಕೆ ಬರುವ ಆದಾಯವೆಷ್ಟು; | ಸರ್ಕಾರದ ಪತ್ರ ಸಂಖ್ಯೆ:ಇಡಿ 141 ಡಿಟಿಇ 2021 ದಿನಾಂಕ:04–12–2021ರಂತೆ ಇತರೆ ಶುಲ್ಕ ರೂ.10,000/–ಗಳನ್ನು ಹೆಚ್ಚುವರಿಯಾಗಿ ನಿಗದಿಪಡಿಸಲಾಗಿದೆ.<br>ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸರ್ಕಾರದಿಂದ, ಸರಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಬಿಡುಗಡೆ ಮಾಡುವ ಅನುದಾನದೊಂದಿಗೆ 2021–22ನೇ ಶೈಕ್ಷಣಿಕ ಸಾಲಿನಿಂದ ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳಿಂದ ಇತರೆ ಶುಲ್ಕವಾಗಿ ರೂ.10,000/–ಗಳನ್ನು ಸಂಗಹಿಸಲು ಹಾಗೂ ಸಂಗ್ರಹಿಸಿದ ಮೊತ್ತವನ್ನು ಸಂಸ್ಥೆಯ ಪಿ.ಡಿ. ಖಾತೆಯಲ್ಲಿ ಉಳಿಸಿಕೊಂಡು ಅತ್ಯಾವಶ್ಯಕವಾಗಿರುವ ಪ್ರಯೋಗಾಲಯ ಉಪಕರಣಗಳನ್ನು ಹಾಗೂ ಪುಸ್ತಕಗಳನ್ನು ನಿರ್ದಿಷ್ಟ ಉದ್ದೇಶಕ್ಕಾಗಿ ಇಲಾಖೆಯ ಮುಖ್ಯಸ್ಥರ ಅನುಮತಿಯೊಂದಿಗೆ ನಿಯಮಾನುಸಾರ ಖರೀದಿಸಲು ಅವಕಾಶ ಕಲ್ಪಿಸಲಾಗಿದೆ. ಈ ಶುಲ್ಕವು ಸರ್ಕಾರದ ಬೊಕ್ಕಸಕ್ಕೆ ಸಂದಾಯವಾಗದ ಕಾರಣ ಇದರಿಂದ ಸರ್ಕಾರಕ್ಕೆ ಯಾವುದೇ ಆದಾಯ ಬರುವುದಿಲ್ಲ. |

| | | |
|---|---|---|
| ಇ) | ಈ ಶುಲ್ಕ ಹೆಚ್ಚಳವು ರಾಜ್ಯದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಿಗೆ ಮಾತ್ರ ಅನ್ವಯಿಸುವುದೇ; | ಹೌದು |
| ಈ) | ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿಗೆ ಸೇರುವ ಬಹುತೇಕ ವಿದ್ಯಾರ್ಥಿಗಳು ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಸೇರಿದವರಾಗಿದ್ದು, ಕೋವಿಡ್, ಅಕಾಲಿಕ ಮಳೆ, ಪ್ರವಾಹ ಪರಿಸ್ಥಿತಿಗಳಿಂದ ಸಾಮಾನ್ಯ ಜೀವನ ಕಷ್ಟಕರವಾಗಿರುವಂತಹ ಈ ಸಂದರ್ಭದಲ್ಲಿ ಶುಲ್ಕ ಹೆಚ್ಚಳದಿಂದ ವಿದ್ಯಾರ್ಥಿಗಳಿಗೆ ಉಂಟಾಗುತ್ತಿರುವ ಹೆಚ್ಚಿನ ಆರ್ಥಿಕ ಹೊರೆಯನ್ನು ತಪ್ಪಿಸುವ ಬಗ್ಗೆ ಸರ್ಕಾರದ ನಿಲುವೇನು? | ಆರ್ಥಿಕವಾಗಿ ಹಿಂದುಳಿದ ಬಡ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡುವ ಉದ್ದೇಶದಿಂದ ಅತ್ಯಾಧುನಿಕ ಪ್ರಯೋಗಾಲಯ ಉಪಕರಣಗಳು ಹಾಗೂ ಉತ್ತಮ ಗುಣಮಟ್ಟದ ಪುಸ್ತಕಗಳನ್ನು ಒದಗಿಸುವ ಉದ್ದೇಶದಿಂದ ಮಾತ್ರ ಇತರೇ ಶುಲ್ಕವನ್ನು ಪಡೆಯಲು ಉದ್ದೇಶಿಸಲಾಗಿರುತ್ತದೆ. |

ಇಡಿ 258 ಟಿಇಸಿ 2021

(ಡಾ॥ ಅಶ್ವತ್ಥನಾರಾಯಣ್.ಸಿ.ಎನ್)
ಉನ್ನತ ಶಿಕ್ಷಣ, ಐಟಿ–ಬಿಟಿ, ವಿಜ್ಞಾನ ಮತ್ತು ತಂತ್ರಜ್ಞಾನ,
ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ ಸಚಿವರು